ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು 3

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 6/11/20

# ಸಚಿವರ ಪತ್ರಕ್ಕೆ ಶಾಸಕರ ನೀರಸ ಪ್ರತಿಕ್ರಿಯೆ

## ಶಾಲಾರಂಭ ಬಗ್ಗೆ ಸುರೇಶ್ ಕುಮಾರ್ ಮನವಿಗೆ 65 ಮಂದಿ ಉತ್ತರ

ಬೆಂಗಳೂರು:ರಾಜ್ಯದಲ್ಲಿ ಶಾಲೆಗಳನ್ನು ಯಾವಾಗ ಆರಂಭಿಸಬೇಕೆಂದು ಸಲಹೆ ಕೋರಿ ಶಿಕ್ಷಣ ಸಚಿವ ಸುರೇಶ್ ಕುಮಾರ್ ಶಾಸಕರಿಗೆ ಕಳುಹಿಸಿದ್ದ ಪತ್ರಕ್ಕೆ ಪ್ರತಿಕ್ರಿಯೆ ನೀಡಿದ್ದು ಬರೀ 65 ಶಾಸಕರಷ್ಟೇ!



ಸೆಪ್ಟೆಂಬರ್‌ನಲ್ಲಿ 224 ಶಾಸಕರು, ವಿಧಾನ ಪರಿಷತ್ ಸದಸ್ಯರ ಅಭಿಪ್ರಾಯವನ್ನು ಸಚಿವರು ಕೋರಿದ್ದು, ಅದನ್ನು ಆಧರಿಸಿ ತೀರ್ಮಾನ ತೆಗೆದುಕೊಳ್ಳುವುದಾಗಿ ಹೇಳಿದ್ದರು. ಆದರೆ, ಬಹುತೇಕ ಶಾಸಕರು ಅಭಿಪ್ರಾಯ ನೀಡಿಲ್ಲ.

ಪತ್ರಕ್ಕೆ ಸ್ಪಂದಿಸಿರುವವರಲ್ಲಿ ಹಲವರು ಕೊರೊನಾ ಪರಿಸ್ಥಿತಿ ತಿಳಿಯಾಗುವವರೆಗೂ ಪ್ರಾಥಮಿಕ ಶಾಲೆ ಆರಂಭಿಸುವುದು ಬೇಡ ಎಂದಿದ್ದಾರೆ. ಮುನ್ನೆಚ್ಚರಿಕಾ ಕ್ರಮದೊಂದಿಗೆ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ತರಗತಿಗಳನ್ನು ಆರಂಭಿಸುವಂತೆ ಸಲಹೆ ನೀಡಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಅವರಲ್ಲಿ ಪ್ರಮುಖವಾಗಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಕೆಲ ಶಾಸಕರು ಕೊರೊನಾ ಪರಿಸ್ಥಿತಿಯಲ್ಲಿ ಶಾಲಾರಂಭವೇ ಬೇಡ ಎಂದಿದ್ದಾರೆ.

> **ಶಾಲಾರಂಭಕ್ಕೆ ಸಂಬಂಧಿಸಿದಂತೆ 65ಕ್ಕೂ ಅಧಿಕ ಜನಪ್ರತಿನಿಧಿಗಳು ಸಲಹೆ ನೀಡಿದ್ದಾರೆ. ಅದೆಲ್ಲವನ್ನೂ ಕ್ರೋಡೀಕರಿಸಿದ್ದೇವೆ. ಎಸ್‌ಡಿಎಂಸಿ ಸೇರಿ ವಿವಿಧ ಇಲಾಖೆಯ ಅಭಿಪ್ರಾಯ ಸಂಗ್ರಹಿಸಿ, ಮುಖ್ಯಮಂತ್ರಿಗಳಿಗೆ ವರದಿ ಸಲ್ಲಿಸಲಿದ್ದೇವೆ.**
>
> **• ಸುರೇಶ್ ಕುಮಾರ್, ಶಿಕ್ಷಣ ಸಚಿವ**

ಸೆಪ್ಟೆಂಬರ್ ಅಂತ್ಯ ಹಾಗೂ ಅಕ್ಟೋಬರ್ ಮೊದಲ ವಾರದಲ್ಲಿ ಶಾಸಕರು ಅಭಿಪ್ರಾಯ ಸಲ್ಲಿಸಿರುವುದರಿಂದ ಈಗ ಅಭಿಪ್ರಾಯಗಳಲ್ಲಿ ವ್ಯತ್ಯಾಸವಾಗಿರುವ ಸಾಧ್ಯತೆಯಿದೆ. ರಾಜ್ಯದಲ್ಲಿ ಸೋಂಕಿತರ ಸಂಖ್ಯೆ ಇಳಿಮುಖವಾಗುತ್ತಿರುವ ಜತೆಗೆ ಗುಣಮುಖರಾಗುತ್ತಿರುವವರ ಸಂಖ್ಯೆ ಹೆಚ್ಚುತ್ತಿದೆ. ಹೀಗಾಗಿ ಸುರಕ್ಷತಾ ಕ್ರಮದೊಂದಿಗೆ ಶಾಲೆ ಆರಂಭಿಸಿ ಎನ್ನುವ ಜನಪ್ರತಿನಿಧಿಗಳ ಸಂಖ್ಯೆಯೂ ಹೆಚ್ಚಿದೆ. ಅದರಲ್ಲೂ ಪಿಯುಸಿ ಹಾಗೂ ಪ್ರೌಢಶಾಲಾ ವಿಭಾಗವನ್ನು ಆರಂಭಿಸಬಹುದು ಎಂದು ಶಾಸಕರು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆಂದು ಸರ್ಕಾರದ ಮೂಲಗಳು ತಿಳಿಸಿವೆ.

ಕೊರೊನಾ ಸಂಪೂರ್ಣ ಕಡಿಮೆಯಾದ ನಂತರವೇ ಶಾಲಾರಂಭಿಸಬೇಕು ಅಥವಾ ಈ ವರ್ಷ ಮಕ್ಕಳನ್ನು ಮುಂದಿನ ತರಗತಿಗೆ ತೇರ್ಗಡೆ ಮಾಡಬೇಕೆಂದು ಮಾಜಿ ಸಿಎಂ ಸಿದ್ದರಾಮಯ್ಯ ಸೇರಿ ಕಾಂಗ್ರೆಸ್‌ನ ಕೆಲವು ಶಾಸಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

### ಉದಯವಾಣಿ ಸಮೀಕ್ಷೆ

**ಕಳೆದ ಅಕ್ಟೋಬರ್‌ನಲ್ಲಿ ಉದಯವಾಣಿ ರಾಜ್ಯದ ಎಲ್ಲ ಶಾಸಕರ ಅಭಿಪ್ರಾಯ ಸಂಗ್ರಹಿಸಿದ್ದು, 163 ಶಾಸಕರು ತಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದರು. ಇವರಲ್ಲಿ ಶೇ 77.30 ಮಂದಿ ಶಾಲೆ ಆರಂಭಿಸುವುದು ಬೇಡ ಎಂದು ಹೇಳಿದ್ದರು. ಶೇ 12ರಷ್ಟು ಶಾಸಕರು ಶಾಲೆ ಆರಂಭಿಸಬಹುದು ಎಂದು ಹೇಳಿದ್ದರು.**